ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಮುಖ್ಯಮಂತ್ರಿ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯವಾಣಿ ದಿನಾಂಕ : DATE 3/6/20


ವಿ.ವಾ 3/6/20

## ಡಿಸಿ, ಎಸ್‌ಪಿ ತಾಲೂಕು ಕೇಂದ್ರದಲ್ಲಿ ವಾಸ ಮಾಡಲಿ: ಬಿಎಸ್‌ವೈ

ಬೆಂಗಳೂರು: ಕೋವಿಡ್-19 ಸೋಂಕು ನಿಯಂತ್ರಣ ಉದ್ದೇಶದಿಂದ ಜಿಲ್ಲಾಧಿಕಾರಿಗಳು, ಜಿಪಂ ಮುಖ್ಯಕಾರ್ಯನಿರ್ವಹಣಾಧಿಕಾರಿ ಹಾಗೂ ಪೊಲೀಸ್ ವರಿಷ್ಠಾಧಿಕಾರಿಗಳು ಪ್ರತ್ಯೇಕವಾಗಿ ತಾಲೂಕು ಕೇಂದ್ರಗಳಲ್ಲಿ ವಾಸ ಮಾಡಿ ಸೋಂಕು ತಡೆ ಪ್ರತಿಬಂಧಕ ಕ್ರಮಗಳನ್ನು ನೋಡಿಕೊಳ್ಳಬೇಕು ಎಂದು ಮುಖ್ಯಮಂತ್ರಿ ಯಡಿಯೂರಪ್ಪ ಆದೇಶ ನೀಡಿದ್ದಾರೆ.

ಸೋಂಕು ನಿಯಂತ್ರಣ ಉದ್ದೇಶದಿಂದ ಕಲಬುರಗಿ, ವಿಜಯಪುರ, ಉಡುಪಿ, ಯಾದಗಿರಿ, ರಾಯಚೂರು ಮತ್ತು ಬೆಳಗಾವಿ ಜಿಲ್ಲೆಗಳ ಜಿಲ್ಲಾಧಿಕಾರಿ, ಜಿಲ್ಲಾ ಪಂಚಾಯತ್ ಸಿಇಒ, ಎಸ್‌ಪಿಗಳ ಜತೆ ವಿಡಿಯೊ ಸಂವಾದ ನಡೆಸಿದ ಅವರು, ತಾಲೂಕು ಕೇಂದ್ರಗಳಲ್ಲಿಯೇ ಮೊಕ್ಕಾಂ ಹೂಡಿ ಸಮುದಾಯಕ್ಕೆ ಸೋಂಕು ಹರಡದಂತೆ ನೋಡಿಕೊಳ್ಳಬೇಕು. ಕೈಗೊಂಡಿರುವ ಕ್ರಮಗಳ ಮೇಲ್ವಿಚಾರಣೆ ಮಾಡಬೇಕು ಎಂದು ಸೂಚಿಸಿದರು. ಜೂನ್ 8 ರಿಂದ ಮೊದಲ ಹಂತದ ಅನ್‌ಲಾಕ್ ನಿಯಮಗಳು ಜಾರಿಗೆ ಬರುತ್ತಿದ್ದು, ಲಾಕ್‌ಡೌನ್‌ನಿಂದ ಸಾಕಷ್ಟು ಸಡಲಿಕೆಗಳನ್ನು ಮಾಡಲಾಗುತ್ತಿದೆ. ಇಂತಹ ಸಂದರ್ಭದಲ್ಲಿ ಕಟ್ಟೆಚ್ಚರದಿಂದ ಇದ್ದು, ಕೇಂದ್ರದ ಮಾರ್ಗಸೂಚಿಗಳನ್ನು ಕಡ್ಡಾಯವಾಗಿ ಪಾಲಿಸಬೇಕು ಎಂದು ತಿಳಿಸಿದರು. ಮಹಾರಾಷ್ಟ್ರದಿಂದ ಆಗಮಿಸುತ್ತಿರುವ ವಲಸಿಗರಿಂದ ಕೋವಿಡ್ 19 ಪ್ರಕರಣಗಳ ಸಂಖ್ಯೆ ಹೆಚ್ಚಾಗುತ್ತಿದ್ದು, ಇದನ್ನು ನಿಯಂತ್ರಣಕ್ಕೆ ತರಲು ಅಗತ್ಯ ಕ್ರಮಗಳನ್ನು ಕೈಗೊಳ್ಳಬೇಕು ಎಂದರು.